ಉಳ್ಳಾಲ ಗ್ರಾಮದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಬಂದಿದ್ದು ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ವರದಿಗಳೊಂದಿಗೆ ಕಳುಹಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಇಲಾಖಾ ಮುಖ್ಯಸ್ಥರ ಹಂತದಲ್ಲಿ ಸೂಚಿಸಲಾಗಿದೆ.

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಈಗಾಗಲೇ ಹಣವನ್ನು ಕಾಯ್ದಿರಿಸಲಾಗಿದೆಯೇ;

ಇಲ್ಲಾ

ಈ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಉದ್ಭವಿಸುವುದಿಲ್ಲ

ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಮೆಟ್ರಿಕ್ ಪೂರ್ವ ಮತ್ತು ನಂತರದಬಾಲಕ-ಬಾಲಕಿಯರ ವಸತಿ ಗೃಹಗಳ ಕೊರತೆ

127 ಶ್ರೀ ಕಿಮ್ಮನೆ ರತ್ನಾಕರ್(ತೀರ್ಥಹಳ್ಳಿ)
ಶ್ರೀ ಡಿ.ಸುಧಾಕರ ಸಮಾಜ ಕಲ್ಯಾಣ ಸಚಿವರು

ಅ) ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ಮತ್ತು ಮೆಟ್ರಿಕ್ ನಂತರದ ಬಾಲಕ-ಬಾಲಕಿಯರ ವಸತಿ ನಿಲಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಆ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 1 ಮೆಟ್ರಿಕ್ ಪೂರ್ವ ಬಾಲಕರ ಹಾಗೂ 1 ಮೆಟ್ರಿಕ್ ಪೂರ್ವ ಬಾಲಕಿಯರ ಪರಿಶಿಷ್ಟ ಜಾತಿ ವಿದ್ಯಾರ್ಥಿನಿಲಯಗಳನ್ನು 180 ಮಂಜೂರಾತಿ ಸಂಖ್ಯಾ ಬಲಕ್ಕೆ ನಡೆಸುತ್ತಿದೆ. ಹಾಲಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಮಂಜೂರಾತಿ ಸಂಖ್ಯೆಗಿಂತ ಕಡಿಮೆ ಅರ್ಜಿಗಳು ಪ್ರವೇಶಕ್ಕಾಗಿ ಬರುತ್ತಿವೆ. ಆದುದರಿಂದ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಕೊರತೆ ಇರುವುದಿಲ್ಲ. ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಹೊಸ ವಿದ್ಯಾರ್ಥಿನಿಲಯಗಳ ಪ್ರಾರಂಭಕ್ಕೆ ಬೇಡಿಕೆ ಇರುತ್ತದೆ. ಈ ಬೇಡಿಕೆಯನ್ನು ಪರಿಶೀಲಿಸಲಾಗುತ್ತಿದೆ.

ಇ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರ, ನಕ್ಸಲ್ ಚಟುವಟಿಕೆ ಹಾಗೂ ಅತಿಯಾದ ಮಳೆ ಇರುವ ಪ್ರದೇಶವೆಂಬುದನ್ನು ಗಮನಿಸಿ, ಸರ್ಕಾರ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ಬಾಲಕ-ಬಾಲಕಿಯರ ವಸತಿನಿಲಯ ಮತ್ತು ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವ ಯೋಚನೆ ಸರ್ಕಾರದ ಗಮನದಲ್ಲಿ ಇದೆಯೇ;

ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಈ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಈಗಿರುವ ಸರ್ಕಾರಿ ವಿದ್ಯಾರ್ಥಿನಿಲಯಗಳು ಮೂಲ ಸೌಲಭ್ಯಗಳಿಂದ ಕೂಡಿದೆಯೇ; ಹಾಗಿಲ್ಲದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು;

ತೀರ್ಥಹಳ್ಳಿ ತಾಲ್ಲೂಕಿನಲ್ಲಿರುವ ಪರಿಶಿಷ್ಟ ಜಾತಿ/ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

ಉ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿರುವ ಯಾವುದೇ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿವೆ; ಹಾಗಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು;

ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಎರಡು ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ.

ಊ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರ ಸರ್ಕಾರವು ನೂತನ ವಿದ್ಯಾರ್ಥಿನಿಲಯದ ಕಟ್ಟಡ ಕಟ್ಟುವ ಬಗ್ಗೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆಯೇ?

ಕಟ್ಟಡ ನಿರ್ಮಾಣ ಮಾಡಬೇಕಾಗಿರುವ ಹಿಂದುಳಿದ ವರ್ಗಗಳ ಎರಡು ವಿದ್ಯಾರ್ಥಿನಿಲಯಗಳಿಗೆ ನಿವೇಶನ ಪಡೆದಿದ್ದು, ಆಯವ್ಯಯ ಲಭ್ಯತೆಯನ್ವಯ ಕಟ್ಟಡ ನಿರ್ಮಾಣದ ಬಗ್ಗೆ ಪರಿಶೀಲನೆಯಲ್ಲಿದೆ.

123 ಶ್ರೀ ಮಹದೇವ ಪ್ರಸಾದ ಹೆಚ್.ಎಸ್ (ಗುಂಡ್ಲುಪೇಟೆ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅ) ಚಾಮರಾಜನಗರ ತಾಲ್ಲೂಕು ಹರವೆ ಹೋಬಳಿ, ಹರವೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಬೇಡಿಕೆ ಸಲ್ಲಿಸಲಾಗಿದೆಯೇ;

ಹೌದು

ಆ) ಹಾಗಿದ್ದಲ್ಲಿ, ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಪ್ರಸ್ತಾವನೆಯನ್ನು ಪರಿಶೀಲಿಸಿ ಮಾರ್ಗಸೂಚಿ ಪ್ರಕಾರ ವರದಿಗಳನ್ನು ತಯಾರಿಸಿ ಕಳುಹಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಇಲಾಖಾ ಮುಖ್ಯಸ್ಥರ ಹಂತದಲ್ಲಿ ಸೂಚಿಸಲಾಗಿದೆ.